**All India Radio: Bangalore**
**Regional Bulletin In Kannada**
**13.03.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.03.2026 / 2.30 p.m.**
**<><><><>**

ಮುಖ್ಯಾಂಶಗಳು

1. ವಾಣಿಜ್ಯ ಬಳಕೆಯ ಸಿಲಿಂಡರ್ ಸರಬರಾಜು ವ್ಯತ್ಯಯ ಹಿನ್ನೆಲೆ - ಹೋಟೆಲ್‌ಗಳು ಒಂದು ವಾರ ಸಹಕರಿಸುವಂತೆ ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಮನವಿ.
2. ಶೈಕ್ಷಣಿಕ ಮೀಸಲಾತಿ ಪಡೆಯಲು ಪೋಷಕರ ವಾರ್ಷಿಕ ಆದಾಯ ಮಿತಿ ೮ ಲಕ್ಷಕ್ಕೆ ನಿಗದಿಪಡಿಸಿದ ಸರ್ಕಾರ
3. ರೈತರ ಖಾತೆಗೆ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತಿನ ಹಣ ಬಿಡುಗಡೆ
4. ರಾಜ್ಯಸಭಾ ಚುನಾವಣೆಯಲ್ಲಿ ಅಡ್ಡ ಮತದಾನದ ಹಿನ್ನೆಲೆ ; ಒಡಿಶಾ ಶಾಸಕರನ್ನು ಕರೆಸಿಕೊಂಡಿಲ್ಲ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ
5. ರಾಜ್ಯಾದ್ಯಂತ ಮುಂದುವರಿದ ಒಣ ಹವೆ ; ಕಲಬುರಗಿಯಲ್ಲಿ ಅತಿಹೆಚ್ಚು ೪೦ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲು

<><><><>

ವಾಣಿಜ್ಯ ಬಳಕೆಯ ಸಿಲಿಂಡರ್‌ಗಳು ಹೋಟೆಲ್‌ಗಳಿಗೆ ಸರಬರಾಜು ಆಗುವಲ್ಲಿ ಒಂದು ವಾರದಿಂದ ೧೦ ದಿನಗಳ ಕಾಲ ಅಡಚಣೆಯಾಗಬಹುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ವಿಧಾನಪರಿಷತ್‌ನಲ್ಲಿ ತಿಳಿಸಿದ್ದಾರೆ. ಕಾಂಗ್ರೆಸ್ ಸದಸ್ಯರಾದ ಐವಾನ್ ಡಿಸೋಜಾ ಮತ್ತು ನಾಗರಾಜ್ ಯಾದವ್ ವಿಷಯ ಪ್ರಸ್ತಾಪಿಸಿ ಆಟೋರಿಕ್ಷಾ, ಹೋಟೆಲ್‌ಗಳಿಗೆ ಗ್ಯಾಸ್ ಸಿಗುತ್ತಿಲ್ಲ. ವಾಣಿಜ್ಯ ಬಳಕೆಯ ಸಿಲಿಂಡರ್‌ಗಳು ಕಾಳಸಂತೆಯಲ್ಲಿ ಮಾರಾಟವಾಗುತ್ತಿದೆ. ಇದರಿಂದ ಅಡುಗೆ ಅನಿಲ ಸಿಗದೇ ಗ್ರಾಹಕರಿಗೆ ಊಟ-ತಿಂಡಿ ಸಿಗುತ್ತಿಲ್ಲ. ಸಾಮಾಜಿಕ ಮಾಧ್ಯಮದಲ್ಲಿ ದರ ಏರಿಕೆ ಬಗ್ಗೆ ರಾಜ್ಯ ಸರ್ಕಾರದ ವಿರುದ್ಧ ಅಪಪ್ರಚಾರವಾಗುತ್ತಿದ್ದು, ಈ ಬಗ್ಗೆ ತನಿಖೆ ನಡೆಸುವಂತೆ ಮನವಿ ಮಾಡಿದರು. ಇದಕ್ಕೆ ಉತ್ತರ ನೀಡಿದ ಸಚಿವ ಮುನಿಯಪ್ಪ, ಒಂದು ವಾರದಲ್ಲಿ ಸಮಸ್ಯೆ ಪರಿಹಾರವಾಗಲಿದೆ. ಹೋಟೆಲ್‌ನವರಿಗೆ ಎಲೆಕ್ಟ್ರಿಕ್ ಸ್ಟೌವ್ ಬಳಕೆ ಮಾಡುವಂತೆ ಮನವಿ ಮಾಡಲಾಗಿದೆ. ಹೋಟೆಲ್‌ನವರು ಒಂದು ವಾರ ಸರ್ಕಾರದೊಂದಿಗೆ ಸಹಕರಿಸುವಂತೆ ತಿಳಿಸಿದ್ದಾರೆ.

<><><><>

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಅಲೆಮಾರಿ ಹಾಗೂ ಅರೆಅಲೆಮಾರಿ ಸಮುದಾಯವೂ ಸೇರಿದಂತೆ ರಾಜ್ಯದಲ್ಲಿ ವಾಸವಿರುವ ಎಲ್ಲಾ ಸಮುದಾಯಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ತಂಗಡಗಿ ಮೇಲ್ಮನೆಯಲ್ಲಿ ಇಂದು ತಿಳಿಸಿದ್ದಾರೆ. ಇದೇ ವೇಳೆ ರಾಜ್ಯ ಸರ್ಕಾರವು ಸಂವಿಧಾನದ ಅನುಚ್ಛೇಧ ೩೪೨-ಎ (೩)ರಂತೆ ಮೀಸಲಾತಿ ಕೆನೆಪದರ ನೀತಿಯನ್ನು ಶಿಕ್ಷಣ ಮತ್ತು ಉದ್ಯೋಗದ ಮೀಸಲಾತಿಗೆ ಅಳವಡಿಸಿಕೊಳ್ಳಬಹುದಾಗಿದೆ ಎಂದು

ಹೇಳಿದ್ದಾರೆ. ಸರ್ಕಾರವು ತನ್ನ ಆದೇಶದಲ್ಲಿ ಅಭ್ಯರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು ೮ ಲಕ್ಷಕ್ಕೆ ನಿಗದಿಪಡಿಸಿದೆ ಎಂದು ಸದನಕ್ಕೆ ತಿಳಿಸಿದ್ದಾರೆ. ಪೋಷಕರ ಆದಾಯವು ೮ ಲಕ್ಷ ಮೀರಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಶೈಕ್ಷಣಿಕ ಮತ್ತು ಉದ್ಯೋಗದಲ್ಲಿ ಮೀಸಲಾತಿ ಪಡೆಯಲು ಅವಕಾಶವಿರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಪ್ರಸ್ತುತ ರಾಜ್ಯದಲ್ಲಿ ನಾಲ್ಕು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ತಲಾ ಒಂದು ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ ಸೇರಿದಂತೆ ೭ ವಿಶ್ವವಿದ್ಯಾಲಯ ಕಾರ್ಯನಿರ್ವಹಿಸುತ್ತಿದೆ ಎಂದು ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ತಿಪಟೂರು ಶಾಸಕ ಕೆ.ಷಡಕ್ಷರಿ ಪ್ರಶ್ನೆಗೆ ಉತ್ತರಿಸಿದ ಸಚಿವರು, ತುಮಕೂರು ತೋಟಗಾರಿಕಾ ಬೆಳೆಗಳನ್ನು ಬೆಳೆಯುವ ಜಿಲ್ಲೆಯಾಗಿದ್ದು, ಬಿದರೆ ಗುಡಿಕಾವಲಿನಲ್ಲಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪಿಸಲು ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳ ಸಮಿತಿ ವರದಿ ನೀಡಿದೆ ಎಂದು ಹೇಳಿದ್ದಾರೆ. ಶಿರಸಿ ಶಾಸಕ ಭೀಮಣ್ಣ ಟಿ. ನಾಯ್ಕ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಎಲೆಚುಕ್ಕೆ ರೋಗದಿಂದ ಬಾಧಿತರಾದ ೧೬ ಸಾವಿರದ ೮೬೬ ಮಂದಿಗೆ ೫ ಕೋಟಿ ೫೩ ಲಕ್ಷ ರೂಪಾಯಿ ಧನ ಸಹಾಯ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಇದಕ್ಕೆ ಬಿಜೆಪಿ ಸದಸ್ಯ ಸುನೀಲ್‌ಕುಮಾರ್ ಸಚಿವರ ಉತ್ತರ ಒಂದಕ್ಕೊಂದು ತಾಳೆಯಾಗುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂನ ಗುವಾಹಟಿಯಲ್ಲಿ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತಿನ ಹಣವನ್ನು ಬಿಡುಗಡೆ ಮಾಡಲಿದ್ದಾರೆ. ೨ ಸಾವಿರ ರೂಪಾಯಿಯಂತೆ ಸುಮಾರು ೯ ಕೋಟಿ ೩೨ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮೂಲಕ ಹಣ ಜಮೆಯಾಗಲಿದೆ. ೧೮ ಸಾವಿರದ ೬೪೦ ಕೋಟಿ ರೂಪಾಯಿಗಳನ್ನು ಪ್ರಧಾನಿ ಬಿಡುಗಡೆ ಮಾಡಲಿದ್ದಾರೆ. ಈ ಯೋಜನೆಯಡಿ ಇದುವರೆಗೆ ರೈತರಿಗೆ ೪ ಲಕ್ಷ ೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು ವರ್ಗಾಯಿಸಲಾಗಿದೆ. ಸರ್ಕಾರ ವರ್ಷಕ್ಕೆ ರೈತರಿಗೆ ಮೂರು ಕಂತುಗಳಲ್ಲಿ ೬ ಸಾವಿರ ರೂಪಾಯಿ ನೀಡುತ್ತಿದ್ದು, ಇಲ್ಲಿಯವರೆಗೆ ೨೧ ಕಂತುಗಳನ್ನು ನೀಡಲಾಗಿದೆ.

<><><>

ರಾಜ್ಯಸಭಾ ಚುನಾವಣೆಯಲ್ಲಿ ಅಡ್ಡ ಮತದಾನದ ಆತಂಕದ ಹಿನ್ನೆಲೆಯಲ್ಲಿ ಒಡಿಶಾ ಕಾಂಗ್ರೆಸ್ ಶಾಸಕರನ್ನು ಬೆಂಗಳೂರು ಸಮೀಪದ ಬಿಡದಿ ರೆಸಾರ್ಟ್‌ಗೆ ಸ್ಥಳಾಂತರಿಸಲಾಗಿದೆ. ಈ ಕುರಿತಂತೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಡಿಶಾ ಶಾಸಕರನ್ನು ತಾವು ಕರೆಸಿಲ್ಲ, ಅವರೇ ಬೆಂಗಳೂರಿಗೆ ಬಂದಿರುವುದು ಎಂದು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಯಾವುದೇ ರೀತಿಯ ಜವಾಬ್ದಾರಿ ನೀಡಿಲ್ಲ. ಒಡಿಶಾದ ಕಾಂಗ್ರೆಸ್ ಅಧ್ಯಕ್ಷರು, ಶಾಸಕರು, ಆಗಮಿಸುವುದನ್ನು ಖಚಿತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅತಿಥಿಗಳಾಗಿ ಆಗಮಿಸಿ ಎಂದು ಆಹ್ವಾನ ನೀಡಲಾಗಿದೆ ಎಂದು ಹೇಳಿದ್ದಾರೆ.

<><><>

ರಾಜ್ಯಾದ್ಯಂತ ಒಣಹವೆ ಮುಂದುವರೆದಿದೆ. ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಉಷ್ಣಾಂಶ ಗಣನೀಯವಾಗಿ ಏರಿಕೆಯಾಗಿದ್ದು, ಕಲಬುರಗಿಯಲ್ಲಿ ಅತಿ ಹೆಚ್ಚು ಉಷ್ಣಾಂಶ ೪೦ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಕೊಪ್ಪಳ, ವಿಜಯಪುರ, ರಾಯಚೂರು, ಗದಗದಲ್ಲಿ ೩೭ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಬೆಂಗಳೂರಿನಲ್ಲಿ ಗರಿಷ್ಠ ಉಷ್ಣಾಂಶ ೩೩ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಸಿ.ಎಸ್.ಪಾಟೀಲ್ (೩೧ ಸೆಕೆಂಡ್‌ಗಳು)**

<><><>

ಯಾದಗಿರಿ ಜಿಲ್ಲೆಯ ಗ್ಯಾಸ್ ಏಜೆನ್ಸಿಗಳ ಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸಭೆ ನಡೆಸಿದ್ದಾರೆ. ಸಿಲಿಂಡರ್‌ಗಳನ್ನು ಬೇರೆಡೆಗೆ ಮಾರಾಟ ಮಾಡುವುದನ್ನು ತಡೆಯಬೇಕು, ಕೃತಕ ಅಭಾವ ಸೃಷ್ಟಿಸಬಾರದು ಹಾಗೂ ನಿಗದಿತ ದರಕ್ಕಿಂತ ಹೆಚ್ಚು ಹಣ ವಸೂಲಿ ಮಾಡಬಾರದು ಎಂದು ಅವರು ಸೂಚನೆ ನೀಡಿದ್ದಾರೆ. ಈ ನಡುವೆ ಯಾದಗಿರಿ ನಗರದ ಹೋಟೆಲ್, ರೆಸ್ಟೋರೆಂಟ್, ಖಾನಾವಳಿ ಹಾಗೂ ಚಹಾ ಅಂಗಡಿಗಳ ಮೇಲೆ ಅಧಿಕಾರಿಗಳ ತಂಡ ಕಳೆದ ರಾತ್ರಿ ದಾಳಿ ನಡೆಸಿ ಅಕ್ರಮವಾಗಿ ಬಳಸಲಾಗುತ್ತಿದ್ದ ೪೫ ಗೃಹಬಳಕೆ ಸಿಲಿಂಡರ್‌ಗಳನ್ನು ವಶಕ್ಕೆ ಪಡೆದುಕೊಂಡಿದೆ. ಪ್ರಕರಣ ಸಂಬಂಧ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳು ಮುಂದಾಗಿದ್ದಾರೆ. ಕೆಲವರು ಗೃಹಬಳಕೆಯ ಸಿಲಿಂಡರ್‌ಗಳನ್ನು ವಾಣಿಜ್ಯ ಬಳಕೆಗಾಗಿ ಬಳಸುತ್ತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಅಧಿಕಾರಿಗಳು ಎರಡು ತಂಡಗಳನ್ನು ರಚಿಸಿ ನಗರದಲ್ಲಿನ ವಿವಿಧ ಪ್ರದೇಶಗಳಲ್ಲಿ ತಪಾಸಣೆ ನಡೆಸಿದ್ದಾರೆ. ಗೃಹಬಳಕೆಯ ಸಿಲಿಂಡರ್‌ಗಳನ್ನು ಅಕ್ರಮ ಬಳಕೆ ಮಾಡಿದವರಿಗೆ ಸಿಲಿಂಡರ್ ದರದ ಮೂರು ಪಟ್ಟು ದಂಡ ವಿಧಿಸಲಾಗುವುದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

<><><>

ವಿಜಯಪುರ ಜಿಲ್ಲೆಯಲ್ಲಿ ಗೃಹಬಳಕೆಯ ಅಡುಗೆ ಅನಿಲ ಸರಬರಾಜು ಸಮರ್ಪಕವಾಗಿ ನಡೆಯುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಆನಂದ.ಕೆ ಮಾಹಿತಿ ನೀಡಿದ್ದಾರೆ. ಗೃಹ ಬಳಕೆ ಸಿಲಿಂಡರನ್ನು ೨೫ ದಿನಗಳ ಬಳಿಕವೇ ಬುಕ್ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಗ್ರಾಹಕರು ಅಡುಗೆ ಅನಿಲವನ್ನು ಮಿತಬಳಕೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗದೆ, ಅಗತ್ಯವಿರುವ ಪ್ರಮಾಣದಲ್ಲಿ ಮಾತ್ರ ಗ್ಯಾಸ್ ಸಿಲಿಂಡರ್ ಪಡೆಯಬೇಕು ಎಂದು ಸೂಚಿಸಿದ್ದಾರೆ. ಯಾವುದೇ ಅನಧಿಕೃತ ಗ್ಯಾಸ್ ಸಿಲಿಂಡರ್ ಸಂಗ್ರಹಣೆ ಅಥವಾ ಅಕ್ರಮ ಮಾರಾಟ ಕಂಡುಬಂದಲ್ಲಿ ಅಗತ್ಯ ವಸ್ತುಗಳ ಕಾಯ್ದೆ ೧೯೫೫ ಹಾಗೂ ಸಂಬಂಧಿತ ನಿಯಂತ್ರಣ ಆದೇಶಗಳಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ವೈದ್ಯಕೀಯ ಕ್ಷೇತ್ರದಲ್ಲಿನ ಆಧುನಿಕ ತಂತ್ರಜ್ಞಾನ ಮತ್ತು ಚಿಕಿತ್ಸಾ ಆವಿಷ್ಕಾರಗಳ ಬಗ್ಗೆ ಅರಿವು ಮೂಡಿಸಿಕೊಳ್ಳುವುದರೊಂದಿಗೆ, ಸೇವಾ ಮನೋಭಾವದಿಂದ ರೋಗಿಗಳ ಸೇವೆ ಮಾಡಲು ನರ್ಸಿಂಗ್ ವಿದ್ಯಾರ್ಥಿಗಳು ಸಜ್ಜಾಗಬೇಕಿದೆ ಎಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವ

ಡಾ.ರಿಯಾಜ್ ಬಾಷ ಕರೆ ನೀಡಿದ್ದಾರೆ. ದೊಡ್ಡಬಳ್ಳಾಪುರದಲ್ಲಿ ಶ್ರೀ ರಾಮ ನರ್ಸಿಂಗ್ ಕಾಲೇಜಿನಲ್ಲಿ ನಡೆದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವೈದ್ಯರಿಗೆ ಸಮಾನವಾಗಿ ರೋಗಿಗಳ ಸೇವೆ ಮಾಡುವ ದಾದಿಯರ ಪಾತ್ರ ಸ್ಮರಣೀಯ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>